# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಬೆಳಗಾವಿ ಜಿಲ್ಲೆ, ಬೆಳಗಾವಿ ತಾಲ್ಲೂಕಿನ ಕಾಕತಿ ಮತ್ತು ಇತರೆ 7 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯಿಂದ ಕಂಗ್ರಾಳಿ ಬಿ.ಕೆ. ಗ್ರಾಮದ ಕಂಗ್ರಾಳಿ ಬಿ.ಕೆ. ಜನವಸತಿಯ 1600 ಮನೆಗಳಿಗೆ ಕಾರ್ಯಾತ್ಮಕ ನಳ ನೀರು ಸಂಪರ್ಕ **(FHTC)** ಕಲ್ಪಿಸುವ ಕಾಮಗಾರಿಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂ:ಗ್ರಾಕುನೀ&ನೈಇ/253/ಗ್ರಾನೀಸ(4)2022 ದಿನಾಂಕ:12.04.2022.
2. ದಿನಾಂಕ:09.09.2022ರಂದು ನಡೆದ ಟೆಂಡರ್ ಅಂಗೀಕಾರ ಸಮಿತಿ(TAA) ಸಭೆಯ ನಡವಳಿಗಳು.
3. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&ನೈ. ಇಲಾಖೆ ಇವರ ಕಡತ ಸಂ:ಗ್ರಾಕುನೀ&ನೈಇ/ಮುಇಂ/ತಾಂತ್ರಿಕ/534/2022.

-----

**<u>ಪೀಠಿಕೆ:</u>**

ಬೆಳಗಾವಿ ಜಿಲ್ಲೆ, ಬೆಳಗಾವಿ ತಾಲ್ಲೂಕಿನ ಕಾಕತಿ ಮತ್ತು ಇತರೆ 7 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯಿಂದ ಕಂಗ್ರಾಳಿ ಬಿ.ಕೆ. ಗ್ರಾಮದ ಕಂಗ್ರಾಳಿ ಬಿ.ಕೆ. ಜನವಸತಿಯ 1600 ಮನೆಗಳಿಗೆ ಕಾರ್ಯಾತ್ಮಕ ನಳ ನೀರು ಸಂಪರ್ಕ **(FHTC)** ಕಲ್ಪಿಸುವ ಕಾಮಗಾರಿಗೆ ಮೇಲೆ(1)ರಲ್ಲಿ ಓದಲಾದ ಆದೇಶದಲ್ಲಿ **ರೂ.803.00ಲಕ್ಷಗಳಿಗೆ** ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ದಿನಾಂಕ:04.07.2022ರ ಟೆಂಡರ್ ಪರಿಶೀಲನಾ ಸಭೆಯಲ್ಲಿ ಉದ್ದೇಶಿತ ಯೋಜನೆಯ ತಾಂತ್ರಿಕ ಬಿಡ್‌ನ್ನು ಪರಿಶೀಲಿಸಲಾಗಿದೆ. 2 ಅರ್ಹ ಗುತ್ತಿಗೆದಾರರ ಭಾಗವಹಿಸಿದ್ದು, ಸಮರ್ಪಕ ದಾಖಲೆ ಒದಗಿಸಿದ ಕಾರಣ ಶ್ರೀ ವಿರುಪಾಕ್ಷಿ ಆರ್. ಗಂಗನಹಳ್ಳಿ ಅರ್ಹ ಬಿಡ್‌ದಾರರೆಂದು ಪರಿಗಣಿಸಿ, ತಾಂತ್ರಿಕ ಬಿಡ್‌ನ್ನು ಅನುಮೋದಿಲಾಗಿರುತ್ತದೆ. ಸದರಿ ಆರ್ಥಿಕ ಬಿಡ್‌ನ್ನು ದಿನಾಂಕ:08.08.2022ರಂದು ವಿಭಾಗ ಕಛೇರಿಯಲ್ಲಿ ತೆರೆಯಲಾಗಿದ್ದು, ಇವರು CSR ದರದ ಮೇಲೆ ಶೇ.4.95ರಷ್ಟು ಹೆಚ್ಚಳದ ಮೊತ್ತಕ್ಕೆ ಕಾಮಗಾರಿ ನಿರ್ವಹಿಸಲು ಒಪ್ಪಿದಲ್ಲಿ ಸದರಿಯವರ ಟೆಂಡರ್ ಅನುಮೋದಿಸಲು ದಿನಾಂಕ:09.09.2022ರ ಟೆಂಡರ್ ಅಂಗೀಕರಿಸುವ ಪ್ರಾಧಿಕಾರ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ. ಸದರಿ ಯೋಜನೆಯ ಕಾಮಗಾರಿಯನ್ನು 2021–22ನೇ ಸಾಲಿನ ಏಕರೂಪ ಅನುಸೂಚಿತ ದರಪಟ್ಟಿಗೆ 18% GSTನ್ನು ಪರಿಗಣಿಸಿರುವುದರಿಂದ ಅಂದಾಜು ಮೊತ್ತವು **ರೂ.992.00ಲಕ್ಷಗಳಿಗೆ ಪರಿಷ್ಕೃತವಾಗಿರುತ್ತದೆ.**

ಮೇಲೆ (3)ರಲ್ಲಿ ಓದಲಾದ ಕಡತದಲ್ಲಿ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಬೆಂಗಳೂರು ರವರು, **ರೂ.992.00ಲಕ್ಷಗಳ** ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಬೇಕೆಂದು ಕೋರಿರುತ್ತಾರೆ.

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ **ಬೆಳಗಾವಿ** ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ ಜಲ ಜೀವನ ಮಿಷನ್ (JJM) ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

 1633

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಬೆಳಗಾವಿ ಜಿಲ್ಲೆ, ಬೆಳಗಾವಿ ತಾಲ್ಲೂಕಿನ ಕಾಕತಿ ಮತ್ತು ಇತರೆ 7 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯಿಂದ ಕಂಗ್ರಾಳಿ ಬಿ.ಕೆ. ಗ್ರಾಮದ ಕಂಗ್ರಾಳಿ ಬಿ.ಕೆ. ಜನವಸತಿಯ 1600 ಮನೆಗಳಿಗೆ ಕಾರ್ಯಾತ್ಮಕ ನಳ ನೀರು ಸಂಪರ್ಕ **(FHTC)** ಕಲ್ಪಿಸುವ ಕಾಮಗಾರಿಯ ಪರಿಷ್ಕೃತ ಅಂದಾಜು ಮೊತ್ತ **ರೂ.992.00ಲಕ್ಷ (ಒಂಭೈನೂರ ತೊಂಭತ್ತೆರಡು ಲಕ್ಷ ರೂಪಾಯಿಗಳು ಮಾತ್ರ)** ಗಳಿಗೆ ಜಲ ಜೀವನ ಮಿಷನ್ (JJM) ಕಾರ್ಯಕ್ರಮದ ಅಡಿಯಲ್ಲಿ ಪರಿಷ್ಕೃತ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಈ ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗ ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ:**

1. Retrofitting ಕಾಮಗಾರಿಗಳಿಗೆ ಪ್ರತಿ ಮನೆಗೆ ಅಂದಾಜು ಮೊತ್ತ ರೂ.15000/- ಮೀರಿದ ಹಾಗೂ Augmentation ಕಾಮಗಾರಿಗಳಿಗೆ ಅವಶ್ಯಕತೆಗೆ ಅನುಗುಣವಾಗಿ Components ಗಳನ್ನು ಪರಿಗಣಿಸಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಂಡು ಟೆಂಡರ್ ಕರೆಯುವ ಪೂರ್ವದಲ್ಲಿ ಅಧೀಕ್ಷಕ ಅಭಿಯಂತರರಿಂದ ತಾಂತ್ರಿಕ ಪರಿಶೀಲನೆ ಮಾಡಿಕೊಂಡು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಸೂಚಿಸಿದೆ.
2. ಕಾಮಗಾರಿಯನ್ನು ಪ್ರಾರಂಭಿಸುವ ಮುನ್ನ 15ನೇ ಹಣಕಾಸಿನಡಿ ಅಂದಾಜು ಮೊತ್ತದ 15% ಹಾಗೂ ಸಮುದಾಯ ವಂತಿಕೆ ಅಂದಾಜು ಮೊತ್ತದ 10% ಸಂಗ್ರಹವಾಗಿರುವ ಬಗ್ಗೆ ಖಾತರಿಪಡಿಸಿಕೊಳ್ಳತಕ್ಕದ್ದು.
3. ಕಾಮಗಾರಿಯ ಅನುಷ್ಠಾನದಲ್ಲಿ ಉತ್ತಮ ಗುಣಮಟ್ಟವನ್ನು ಕಾಯ್ದುಕೊಳ್ಳತಕ್ಕದ್ದು ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು.
4. ಸದರಿ ಅನುದಾನವನ್ನು ಕರ್ನಾಟಕ ಪಾರದರ್ಶಕ ಕಾಯ್ದೆ-1993 ಮತ್ತು ಕರ್ನಾಟಕ ಪಾರದರ್ಶಕ ನಿಯಮಗಳು-2000, ಕರ್ನಾಟಕ ಆರ್ಥಿಕ ಸಂಹಿತೆ-1958 ಹಾಗೂ ಚಾಲ್ತಿ ನಿಯಮಗಳನ್ನು ಅನುಸರಿಸತಕ್ಕದ್ದು.
5. ಕಾಮಗಾರಿಯ ಅನುಷ್ಠಾನದಲ್ಲಿ ಯಾವುದೇ ಬದಲಾವಣೆ ಮಾಡಬೇಕಾದ್ದಲ್ಲಿ ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರಿಂದ ಒಪ್ಪಿಗೆ ಪಡೆಯತಕ್ಕದ್ದು.
6. ಕಾಮಗಾರಿಗೆ ನಿಗದಿಪಡಿಸಿದ ಅನುದಾನವನ್ನು ಬೇರೆ ಕಾಮಗಾರಿಗೆ ಅಥವಾ ಯೋಜನೆಗೆ ವರ್ಗಾಯಿಸತಕ್ಕದ್ದಲ್ಲ.
7. ಕಾಮಗಾರಿಯ ಅನುಷ್ಠಾನದ ಮೂರು ಹಂತದ GPS ಛಾಯಾ ಚಿತ್ರಗಳನ್ನು ತೆಗೆದು ನಿರ್ವಹಿಸತಕ್ಕದ್ದು.
8. ಕಾಮಗಾರಿ ಪ್ರಾರಂಭಿಸುವ ಪೂರ್ವದಲ್ಲಿ ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&ನೈ ವೃತ್ತ ಕಛೇರಿಯವರಿಂದ ತಾಂತ್ರಿಕ ಮಂಜೂರಾತಿ ಪಡೆದುಕೊಳ್ಳತಕ್ಕದ್ದು.
9. ಎಲ್ಲಾ ತಾಂತ್ರಿಕ ಅಂಶಗಳನ್ನು JJM ಮಾರ್ಗಸೂಚಿಗಳನ್ವಯ ಪರಿಶೀಲಿಸಿದ ನಂತರ ತಾಂತ್ರಿಕ ಮಂಜೂರಾತಿ ನೀಡತಕ್ಕದ್ದು.
10. ತಾಂತ್ರಿಕ ಮಂಜೂರಾತಿ ನೀಡುವ ಮುನ್ನ ಕಾಮಗಾರಿಯ ಜಲಮೂಲದ ಸುಸ್ಥಿರತೆ ಬಗ್ಗೆ ಖಾತರಿಪಡಿಸಿಕೊಳ್ಳತಕ್ಕದ್ದು.
11. ಕಾಮಗಾರಿಯಲ್ಲಿ ಪರಿಗಣಿಸಿರುವ ಪ್ರಾಕ್ಷೇಪಿತ ಜನಸಂಖ್ಯೆ (Decadal Growth Rate) ಬಗ್ಗೆ ಪರಿಶೀಲಿಸತಕ್ಕದ್ದು.
12. ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&ನೈ ವೃತ್ತ ಕಛೇರಿಯವರಿಂದ ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಭೌತಿಕ ಹಾಗೂ ಆರ್ಥಿಕ ಪ್ರಗತಿಯನ್ನು IMISನಡಿ ದಾಖಲಿಸತಕ್ಕದ್ದು.

13. ಸದರಿ ಕಾಮಗಾರಿಯಲ್ಲಿ ಪರಿಗಣಿಸಿರುವ ಮನೆಗಳನ್ನು ಮುಂದಿನ ವರ್ಷದ YDUನಲ್ಲಿ update ಮಾಡಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ನಿರ್ದೇಶಕರು,
ಹಾಗೂ ಪದನಿಮಿತ್ತ ಉಪ ಕಾರ್ಯದರ್ಶಿ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಬೆಳಗಾವಿ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
7. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಬೆಳಗಾವಿ.**
9. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಬೆಳಗಾವಿ.**
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸಂಪಾದಕರು, "ಕರ್ನಾಟಕ ವಿಕಾಸ", ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
12. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
13. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಬೆಳಗಾವಿ.**
14. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&.ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು) ಬೆಂಗಳೂರು.
15. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ) ಬೆಂಗಳೂರು.
16. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು) ಬೆಂಗಳೂರು.
17. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.